# ಕನ್ನಡ ಪೋಸ್ಟ್

ಸಂಪಾದಕ : ಮಂಜು ಬನವಾಸೆ | KANNADA POST | ಇದು ಸುದ್ದಿ ವಿಳಾಸ | ಕನ್ನಡ ದಿನಪತ್ರಿಕೆ

ಹಾಸನ | E-mail : kannadapostnews@gmail.com | / ಕನ್ನಡ post | Price: ₹1

Vol.No.02 | Issue. 141 | Pages. 2 | Date: 09-05-2026, SATURDAY | RNI NO: KARKAN/2024/89601 | Kannada Daily

ಸಂಪುಟ : 02 - ಸಂಚಿಕೆ : 141 - ಪುಟಗಳು : 2 | 09-05-2026 | ಶನಿವಾರ | Ph: 8762954248 | ದರ : ₹1


## ಪ್ರಾದೇಶಿಕ ಪಕ್ಷಕ್ಕೆ ಅಧಿಕಾರ: ವಾತಾವರಣ ಇಲ್ಲ ಎಂದ ಎಚ್ಚರಿಕೆ

# ತಮಿಳುನಾಡು ಬದಲಾವಣೆ ನಿರೀಕ್ಷಿಸಿದ್ದೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹೊಳೆನರಸೀಪುರ: ತಮಿಳು ನಾಡು ರಾಜ್ಯದಲ್ಲಿ ಉಂಟಾಗಿರುವ ಸರ್ಕಾರ ರಚನೆ ಕಸರತ್ತು ಒಂದೆರಡು ದಿನಗಳಲ್ಲಿ ಬಗೆಹರಿಯ ಬಹುದು ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಹೇಳಿದರು.

ತಾಲೂಕಿನ ಮಾವಿನಕೆರೆ ಬೆಟ್ಟದ ರಂಗನಾಥಸ್ವಾಮಿ ಸನ್ನಿಧಿಯಲ್ಲಿ ವಿಶೇಷ ಪೂಜೆ ಸಲ್ಲಿಸಿದ ಬಳಿಕ ಮಾತನಾಡಿದ ಅವರು, ತಮಿಳುನಾಡು ರಾಜ್ಯಪಾಲರು ಕಾನೂನು ಪಂಡಿತರಿಂದ ಮಾಹಿತಿ ಪಡೆದು ಸ್ಪಷ್ಟ ಬಹುಮತದ ಸಂಖ್ಯೆಯನ್ನು ಗಮನಕ್ಕೆ ತನ್ನಿ ಎಂದಿದ್ದಾರೆ. ಸ್ಪಷ್ಟ ಬಹುಮತ ಬರದೇ ಇದ್ದಾಗ ಇದು ಸಹಜ ಎಂದರು.

ಡಿಎಂಕೆ-ಎಐಎಡಿಎಂಕೆ ಎರಡೂ ಪಕ್ಷಗಳು ಸೇರಿ ಸರ್ಕಾರ ರಚನೆ ಮಾಡುವುದು ನನ್ನ ರಾಜಕೀಯ ಅನುಭವದಲ್ಲಿ ಊಹಾಪೋಹ, ಹೀಗೆ ಆಲೋಚಿಸುವುದೇ ತಪ್ಪು. ಎರಡೂ ಪಕ್ಷಗಳು ಸೇರಿ ಸರ್ಕಾರ ಮಾಡುವುದಿಲ್ಲ ಅನ್ನೋದು ನನ್ನ ಅನುಭವದ ಮಾತು ಎಂದು ನುಡಿದರು.

ಸ್ಪಷ್ಟ ಬಹುಮತ ಪಡೆಯಲು ವಿಜಯ್ ಕೂಡ ಪ್ರಯತ್ನ ಪಡುತ್ತಿದ್ದಾರೆ. ಹಾಗಾಗಿ ಎರಡು ದಿನಗಳಲ್ಲಿ ಅಲ್ಲಿನ ಪರಿಸ್ಥಿತಿ ಸರಿ ಹೋಗುತ್ತೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.



> ಕರ್ನಾಟಕದಲ್ಲೂ ಮುಂದಿನ ಚುನಾವಣೆಯಲ್ಲಿ ಬದಲಾವಣೆ ಆಗಬಹುದು ಎಂಬುದು ಜನಸಾಮಾನ್ಯರ ನಡುವೆ ಚರ್ಚೆ ಆಗುತ್ತಿದೆ. ಏನಾಗುತ್ತೆ ಅಂತ ಕಾದು ನೋಡೋಣ ಎಂದ ಕುಮಾರಸ್ವಾಮಿ, ಕರ್ನಾಟಕದಲ್ಲಿ ಪ್ರಾದೇಶಿಕ ಪಕ್ಷಗಳು ಸ್ವತಂತ್ರವಾಗಿ ಅಧಿಕಾರಕ್ಕೆ ಬರುವ ವಾತಾವರಣ ಇಲ್ಲ.
> ಇಲ್ಲಿಯ ರಾಜಕಾರಣಕ್ಕೂ, ಬೇರೆ ರಾಜ್ಯಗಳ ರಾಜಕಾರಣಕ್ಕೂ ಬಹಳಷ್ಟು ವ್ಯತ್ಯಾಸವಿದೆ ಎಂದರು.

### ನಾನು ನಿರೀಕ್ಷೆ ಮಾಡಿದ್ದೆ

ತಮಿಳುನಾಡಿನಲ್ಲಿ ನಾನಂತೂ ನಿರೀಕ್ಷೆ ಮಾಡಿದ್ದೆ. ತಿಂಗಳ ಹಿಂದೆ ಸ್ನೇಹಿತರಿಗೂ ಹೇಳಿದ್ದೆ, 50 ವರ್ಷಗಳಿಂದ ಎರಡು ದ್ರಾವಿಡ ಪಕ್ಷಗಳ ಆಡಳಿತ ಏನೆಂದು ಅಲ್ಲಿಯ ಜನ ನೋಡಿದ್ರು, ಈಗ ಹೊಸ ವ್ಯವಸ್ಥೆ ತರಲು ಜನಸಾಮಾನ್ಯರು ನಿರ್ಧಾರ ಮಾಡ್ತಾರೆ ಎನ್ನುವ ನಿರೀಕ್ಷೆ ಇಟ್ಟಿದ್ದೆ. ತಮಿಳುನಾಡಿನಲ್ಲಿ ಜನ ಸಿನಿಮಾದ ಪ್ರಭಾವಕ್ಕೆ ಒಳಗಾಗುತ್ತಾರೆ ಎಂಬುದು ಹಲವಾರು ಸಂದರ್ಭದಲ್ಲಿ ನಡೆದಿದೆ, ಈಗಲೂ ನಡೆದಿದೆ ಎಂದು ವ್ಯಾಖ್ಯಾನಿಸಿದರು.

### ದೇವರು ಕಾಪಾಡಬೇಕು

ವಿಜಯ್ ಘೋಷಣೆ ಮಾಡಿರುವ ಉಚಿತ ಗ್ಯಾರೆಂಟಿ ಬಗ್ಗೆ ದೇವರು ಕಾಪಾಡಬೇಕು. ಈ ರೀತಿಯ ಘೋಷಣೆಗೆ ವಿಜಯ್‌ಗೆ ಯಾರು ಪ್ರಭಾವ ಬಿರಿದರೋ ಗೊತ್ತಿಲ್ಲ. ತಮಿಳುನಾಡು ಬಜೆಟ್ ವರ್ಷಕ್ಕೆ 3.40 ಲಕ್ಷ ಕೋಟಿ.

ಇದೀಗ ವಿಜಯ್ ಘೋಷಣೆ ಈಡೇರಿಸಲು 6-7 ಲಕ್ಷ ಕೋಟಿ ಬೇಕು. ಹಣ ಎಲ್ಲಿಂದ ತರುತ್ತಾರೆ. ದೇವರೇ ಕಾಪಾಡಬೇಕು ಎಂದು ಹೆಚ್ಚಿಕೆ ಹೇಳಿದರು.

ತಮಿಳುನಾಡಿನಲ್ಲಿ ಡಿಎಂಕೆ ಮರಳಿ ಅಧಿಕಾರ ಹಿಡಿಯಲಿದೆ ಎಂದು ಅನೇಕರು ಅಂದಾಜಿಸಿದ್ದರು. ಆದರೆ ವಿಜಯ್ ಅವರ ಈಗಿನ ಸಾಧನೆ ಅನಿರೀಕ್ಷಿತ. ಎಲ್ಲರಿಗೂ ಅಚ್ಚರಿ ಉಂಟುಮಾಡಿದೆ ಎಂದರು.

### ಚರ್ಚೆ ಅನವಶ್ಯಕ

ಟಿವಿಕೆಗೆ ಕಾಂಗ್ರೆಸ್ ಬೆಂಬಲ ನೀಡಿರುವ ಬಗ್ಗೆ ಕೇಳಿದ ಪ್ರಶ್ನೆಗೆ ಆ ಪಕ್ಷದ ನಡವಳಿಕೆ ಬಗ್ಗೆ ಚರ್ಚೆ ಮಾಡುವುದು ಅನವಶ್ಯಕ. ಅವರು ಯಾವ್ಯಾವ ಸಂದರ್ಭದಲ್ಲಿ, ಯಾವ ರೀತಿ ಸರ್ಕಾರಗಳನ್ನು ಅಸ್ಥಿರಗೊಳಿಸಿದ್ದಾರೆ ಎಂಬುದಕ್ಕೆ ಸಾಕಷ್ಟು ನಿದರ್ಶನಗಳಿವೆ. ದೇವೇಗೌಡರು ಅಧಿಕಾರದಲ್ಲಿದ್ದಾಗ ಯಾವ ಕಾರಣ ಕೊಟ್ಟು ಸರ್ಕಾರ ತೆಗೆದರು. ಕಾಂಗ್ರೆಸ್‌ನಲ್ಲಿ ಅವರಿಗೆ ಬೇಕಾದ ರೀತಿಯಲ್ಲಿ ತೀರ್ಮಾನ ಮಾಡುವ ಹಲವಾರು ಉದಾಹರಣೆ ಕೊಡಬಹುದು. ಇವತ್ತು ಡಿಎಂಕೆ ಜೊತೆಗಿನ 20 ವರ್ಷದ ಸಂಬಂಧ ಕಡಿದು ವಿಜಯ್ ಜೊತೆ ಸೇರಿದ್ದಾರೆ. ಈ ಬಗ್ಗೆ ನಾನು ಟೀಕೆಯನ್ನೂ ಮಾಡಲ್ಲ, ಚರ್ಚಿಸುವುದೂ ಇಲ್ಲ ಎಂದು ಸ್ಪಷ್ಟಪಡಿಸಿದರು.

ಶೃಂಗೇರಿ ಮರು ಎಣಿಕೆ ವಿಚಾರದಲ್ಲಿ ಎಫ್‌ಐಆರ್ ಆಗಿದೆ, ರಾಜೇಗೌಡರು, ಚುನಾವಣೆ ಆಯೋಗಕ್ಕೆ ಮತ್ತೊಂದು ದೂರು ಕೊಟ್ಟಿದ್ದಾರೆ. ಏನೇನು ಬೆಳವಣಿಗೆ ಆಗುತ್ತೆ ಅಂಥ ಮುಂದೆ ನೋಡೋಣ, ಈಗೀನ ಪರಿಸ್ಥಿತಿಯಲ್ಲಿ ಓಟ್ ಚೋರಿ ಚರ್ಚೆ ಅರ್ಥಹೀನ ಎಂದರು.

ಇಡಿ, ಐಟಿ ದುರುಪಯೋಗ ಎಂಬ ಕಾಂಗ್ರೆಸ್ ಆರೋಪಕ್ಕೆ ಅವರಿಗೆ ಬೇಕಾದಂತೆ ವ್ಯಾಖ್ಯಾನ ಮಾಡ್ತಾರೆ, ಅವರಿಗೆ ಬೇಕಾದಾಗ ಚೆನ್ನಾಗಿದೆ ಅಂತರೆ, ಸೋತಾಗ ಚೆನ್ನಾಗಿಲ್ಲ ಅಂತಾರೆ. ಪಶ್ಚಿಮ ಬಂಗಾಳದಲ್ಲಿ ಸ್ಪಷ್ಟ ಬಹುಮತ ಬಂದ ಮೇಲೆ ಮುಗೀತು, ಬೇರೆಲ್ಲ ಚರ್ಚೆ ಅನವಶ್ಯಕ ಎಂದರು.

ನಾಳೆ ಯಡಿಯೂರಪ್ಪ ಅವರ ಅಭಿಮಾನೋತ್ಸವ ಕಾರ್ಯಕ್ರಮ ನಡೆಯುತ್ತಿದೆ. ಯಡಿಯೂರಪ್ಪ ಅವರ 50 ವರ್ಷದ ಸಾಧನೆ ಬಗ್ಗೆ, ರಾಜ್ಯಕ್ಕೆ ಕೊಟ್ಟಿರುವ ಕೊಡುಗೆ ಬಗ್ಗೆ ಬಿಜೆಪಿ ಪಕ್ಷದಿಂದ ಕಾರ್ಯಕ್ರಮ ನಡೀತಿದೆ, ನನಗೆ ಬೇರೆ ಕಾರ್ಯಕ್ರಮ ಇರುವುದರಿಂದ ನಾನು ಭಾಗವಹಿಸುತ್ತಿಲ್ಲ ಎಂದು ಸ್ಪಷ್ಟಪಡಿಸಿದರು.

## ಬೂವನಹಳ್ಳಿ ಜಾತ್ರೆಗೆ ಹೆಚ್ಡಿಕೆ ಚಾಲನೆ

ಹಾಸನ: ಬೂವನಹಳ್ಳಿ ಗ್ರಾಮದಲ್ಲಿ ಇಂದಿನಿಂದ ಮೂರು ದಿನಗಳ ಕಾಲನಡೆಯುವ ಶಕ್ತಿ ದೇವತೆ ಶ್ರೀ ದೇವಿರಮ್ಮ ದೇವಿ ರಥೋತ್ಸವ ಮತ್ತು ಜಾತ್ರಾ ಮಹೋತ್ಸವಕ್ಕೆ ಕೇಂದ್ರ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ ಕುಮಾರಸ್ವಾಮಿ ಇಂದು ಚಾಲನೆ ನೀಡಿದರು.

ಆರಂಭದಲ್ಲಿ ಶಕ್ತಿ ದೇವತೆಗೆ ವಿಶೇಷ ಪೂಜೆ ಸಲ್ಲಿಸುವ ಮೂಲಕ ಚಾಲನೆ ನೀಡಿದ ಅವರು, ದೇವರ ಆಶೀರ್ವಾದ ಎಲ್ಲರ ಮೇಲಿರಲಿ, ಎಲ್ಲ ರೀತಿಯಲ್ಲೂ ಜನರು ಸುಭಿಕ್ಷವಾಗಿರಲಿ ಎಂದು ಆಶಿಸಿದರು.

ಇಂದು ಜಾತ್ರೋತ್ಸವಕ್ಕೆ ಚಾಲನೆ ನೀಡಿ ದೇವಿಯ ಆಶೀರ್ವಾದ ಪಡೆದಿರುವುದು ಸಂತೋಷ ತಂದಿದೆ ಎಂದರು.

ಹಾಗೆಯೇ ನಮ್ಮ ಕುಟುಂಬದ ಸದಸ್ಯರು ಹಾಸನಕ್ಕೆ ಬರುವ ಸಂದರ್ಭದಲ್ಲಿ ಮಾವಿನಕೆರೆ ಬೆಟ್ಟದ ರಂಗನಾಥಸ್ವಾಮಿ ದೇವಾಲಯಕ್ಕೆ ಬರುವುದು ಸರ್ವೆ ಸಾಮಾನ್ಯ. ನಾನೂ ಇಂದು ದೇವರ ದರ್ಶನ ಪಡೆದಿದ್ದೇನೆ ಎಂದರು.

ರಾಜ್ಯದಲ್ಲಿ ಇತ್ತೀಚೆಗೆ ನಡೆದ ಎರಡು ಉಪ ಚುನಾವಣೆ ಫಲಿತಾಂಶ ಮುಂದಿನ ಯಾವುದೇ ಚುನಾವಣೆಗೆ



ದಿಕ್ಸೂಚಿ ಅಲ್ಲ ಎಂದ ಅವರು, ತಾಪಂ, ಜಿಪಂ ಸೇರಿ ಸ್ಥಳೀಯ ಸಂಸ್ಥೆ ಚುನಾವಣೆಗೆ ಎಲ್ಲ ಪಕ್ಷಗಳು ಸಿದ್ಧತೆ ಮಾಡಿಕೊಳ್ಳುತ್ತಿರುವಂತೆಯೇ ಜೆಡಿಎಸ್ ಪಕ್ಷ ಸಹ ತಯಾರಿ ಮಾಡಿಕೊಳ್ಳುತ್ತಿದೆ ಎಂದು ಹೇಳಿದರು.

ಈ ಸಂದರ್ಭದಲ್ಲಿ ಸ್ಥಳೀಯ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್, ಬೂವನಹಳ್ಳಿ ಗ್ರಾಮದ ಮುಖಂಡರಾದ ಸ್ವಾಮಿಗೌಡ, ಬಿ.ಆರ್.ಬೊಮ್ಮೇಗೌಡ, ಮಲ್ಲೇಶ್, ರವಿಕುಮಾರ್, ಜಿಲ್ಲಾ ಜೆಡಿಎಸ್ ವಕ್ತಾರ ರಘು ಹೊಂಗೆರೆ ಮೊದಲಾದವರಿದ್ದರು.

## ಕ್ರಿಕೆಟ್ ಸಮ್ಮಿಲನ ಸೌಹಾರ್ದ ಪಂದ್ಯಾವಳಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ ಜಿಲ್ಲಾ ಪತ್ರಕರ್ತರ ಸಂಘದ ವತಿಯಿಂದ ಮೇ 9 ಮತ್ತು 10 ರಂದು ನಗರದ ಕಲಾ ಮತ್ತು ವಿಜ್ಞಾನ ಕಾಲೇಜು ಮೈದಾನದಲ್ಲಿ ನಡೆಯುವ ಪತ್ರಕರ್ತರು- ಜನಪ್ರತಿನಿಧಿಗಳು ಹಾಗೂ ವಿವಿಧ ಇಲಾಖೆ ಅಧಿಕಾರಿಗಳ ಕ್ರಿಕೆಟ್ ಸಮ್ಮಿಲನ ಸೌಹಾರ್ದ ಪಂದ್ಯಾವಳಿ ಹಿನ್ನೆಲೆ ಇಂದು ಪತ್ರಕರ್ತರ ಸಂಘದ ಜೆರ್ಸಿ ಹಾಗೂ ಟ್ರೋಫಿಯನ್ನು ಸಂಘದ ಸಭಾಂಗಣದಲ್ಲಿ ಅನಾವರಣ ಮಾಡಲಾಯಿತು.

ಕೆಯೂಡಬ್ಲ್ಯೂಜೆ ಉಪಾಧ್ಯಕ್ಷ ಹೆಚ್.ಬಿ.ಮದನಗೌಡ, ಜಿಲ್ಲಾಧ್ಯಕ್ಷ ಜೆ.ಆರ್.ಕೆಂಚೇಗೌಡ, ಉಪಾಧ್ಯಕ್ಷರಾದ ಎನ್.ನಂಜುಂಡೇಗೌಡ, ಜಿ.ಪ್ರಕಾಶ್, ರಾಜ್ಯ ಕಾರ್ಯಕಾರಿ ಸಮಿತಿ ಸದಸ್ಯ ಕೆ.ಪಿ.ಎಸ್.ಪ್ರಮೋದ್, ಪ್ರಧಾನ ಕಾರ್ಯದರ್ಶಿ ಕೆ.ಜಿ.ಸುರೇಶ್, ಕಾರ್ಯದರ್ಶಿ ಖುಷ್ವಂತ್, ಖಜಾಂಚಿ, ಆಟಗಾರರಾದ ಅಭಿಜಿತ್, ಸಚಿನ್ ಮೊದಲಾದವರಿದ್ದರು.

## ಕೋಡಿಮಠಕ್ಕೆ ಶಾಸಕ ಮೇಟಿ ಭೇಟಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**



ಅರಸೀಕೆರೆ ತಾಲ್ಲೂಕಿನ ಸುಕ್ಷೇತ್ರ ಕೋಡಿ ಮಠಕ್ಕೆ ಬಾಗಲಕೋಟೆ ಕ್ಷೇತ್ರದ ನೂತನ ಶಾಸಕ ಉಮೇಶ್ ಮೇಟಿ ಭೇಟಿ ನೀಡಿ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಸ್ವಾಮೀಜಿ ಆಶೀರ್ವಾದ ಪಡೆದರು. ನಂತರ ಒಂದು ಗಂಟೆಗೂ ಹೆಚ್ಚಿನ ಕಾಲ ಸ್ವಾಮೀಜಿ ಅವರೊಂದಿಗೆ ಗೌಪ್ಯ ಸಮಾಲೋಚನೆ ನಡೆಸಿದರು. ಉಮೇಶ್ ಮೇಟಿ ಮಾತ್ರವಲ್ಲ ಅವರ ತಂದೆ, ತಾತನ ಕಾಲದಿಂದಲೂ ಮಠಕ್ಕೆ ನಡೆದುಕೊಳ್ಳುತ್ತಾ ಬಂದಿದ್ದಾರೆ. ಅದೇ ರೀತಿ ಶಿಷ್ಯ, ಉಮೇಶ್ ಮೇಟಿ ಮಠಕ್ಕೆ ಭೇಟಿ ನೀಡಿದ್ದಾರೆ ಎಂದರು ಸ್ವಾಮೀಜಿ ಹೇಳಿದರು. ಈ ವೇಳೆ ಕೋಡಿಮಠದ ಉತ್ತರಾಧಿಕಾರಿ ಚೇತನ್ ಮರಿದೇವರು ಇದ್ದರು.

## ನೆಲಮಂಗಲ ಬಳಿ ಭೀಕರ ರಸ್ತೆ ಅಪಘಾತ



### ಸಕಲೇಶಪುರದ ಇಬ್ಬರು ಯುವಕರು ಸಾವು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ರಾಜ್ಯ ರಸ್ತೆ ಸಾರಿಗೆ ಬಸ್ ಮತ್ತು ಬೈಕ್ ನಡುವೆ ಸಂಭವಿಸಿದ ಭೀಕರ ಅಪಘಾತದಲ್ಲಿ ಸಕಲೇಶಪುರ ಮೂಲದ ಇಬ್ಬರು ಯುವಕರು ದಾರುಣವಾಗಿ ಮೃತಪಟ್ಟ ಘಟನೆ ನಡೆದಿದೆ.

ಪಟ್ಟಣದ ಕುಶಾಲನಗರದ ಚಿರಂತ್ (34) ಹಾಗೂ ಯಶವಂತ್ (24) ಅವರು ಗುರುವಾರ ಮಧ್ಯರಾತ್ರಿ ಸುಮಾರು 12:30ರ ವೇಳೆ ಬೆಂಗಳೂರಿನಿಂದ ಸಕಲೇಶಪುರಕ್ಕೆ ವಾಪಸ್ಸಾಗುತ್ತಿದ್ದಾಗ, ಅವರು ಸವಾರಿಯಾಗಿದ್ದ ಪಲ್ಸರ್-220 ಬೈಕ್ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ನೆಲಮಂಗಲ ಸಮೀಪದ ಹೆಗ್ಗಡಹಳ್ಳಿ ಬಳಿ ರಾಷ್ಟ್ರೀಯ ಹೆದ್ದಾರಿ 75ರಲ್ಲಿ ಹಾಸನದಿಂದ ಬೆಂಗಳೂರಿಗೆ ತೆರಳುತ್ತಿದ್ದ ಕೆಎಸ್‌ಆರ್‌ಟಿಸಿ ಬಸ್‌ಗೆ ಡಿಕ್ಕಿ ಹೊಡೆದಿದೆ. ಅಪಘಾತದ ತೀವ್ರತೆಗೆ ಚಿರಂತ್ ಅವರ ದೇಹ ತುಂಡಾಗಿ ರಸ್ತೆ ತುಂಬಾ ಚದುರಿದಿದ್ದು, ದೃಶ್ಯ ಕಂಡವರಲ್ಲಿ ಆತಂಕ ಮೂಡಿಸಿದೆ. ಇಬ್ಬರೂ ಕಾರ್ಯನಿಮಿತ್ತ ಬೆಂಗಳೂರಿಗೆ ತೆರಳಿ ವಾಪಸ್ಸಾಗುತ್ತಿದ್ದ ವೇಳೆ ಈ ದುರಂತ ಸಂಭವಿಸಿದೆ ಎಂದು ತಿಳಿದುಬಂದಿದೆ.

ಮೃತದೇಹಗಳನ್ನು ನೆಲಮಂಗಲ ಸರ್ಕಾರಿ ಆಸ್ಪತ್ರೆಗೆ ರವಾನಿಸಲಾಗಿದ್ದು, ಶವಗಾರದಲ್ಲಿ ಇರಿಸಲಾಗಿದೆ.

ಪ್ರಕರಣದ ಮಾಹಿತಿ ತಿಳಿದ ಸಕಲೇಶಪುರ ನಗರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

ಚಿರಂತ್ ಹಾಗೂ ಯಶವಂತ್ ಅವರಿಗೆ ಅಪಾರ ಬಂಧು-ಬಳಗ ಮತ್ತು ಸ್ನೇಹಿತರಿದ್ದು, ಅವರ ಅಗಲಿಕೆಗೆ ಕುಟುಂಬಸ್ಥರು ಹಾಗೂ ಆತ್ಮೀಯರು ಕಂಬನಿ ಮಿಡಿದಿದ್ದಾರೆ.

## ದೇಶ ಸುಭಿಕ್ಷವೇ ನೆಮ್ಮದಿಯ ಮೂಲ: ಶಾಸಕ ಸಿಮೆಂಟ್ ಮಂಜು

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ದೇಶ ಸುಭಿಕ್ಷವಾಗಿದ್ದಲ್ಲಿ ಮಾತ್ರ ಜನರು ನೆಮ್ಮದಿಯಿಂದ ಬದುಕಲು ಸಾಧ್ಯ ಎಂದು ಶಾಸಕ ಸಿಮೆಂಟ್ ಮಂಜು ಹೇಳಿದರು.

ಪಟ್ಟಣದ ಎಚ್.ಡಿ.ಪಿ.ಎ ಭವನದಲ್ಲಿ ತಾಲೂಕು ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಗಳ ಒಕ್ಕೂಟದ ವತಿಯಿಂದ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿಗಳು ಹಾಗೂ ಶಿಕ್ಷಕರಿಗೆ ಸನ್ಮಾನ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಜಿಲ್ಲಾಡಳಿತವು ಎಸ್.ಎಸ್.ಎಲ್.ಸಿ ಸಾಧಕರಿಗೆ ನೀಡುವ ಸನ್ಮಾನದಲ್ಲಿ ಅನುದಾನ ರಹಿತ ಖಾಸಗಿ ಶಾಲೆಗಳ ವಿದ್ಯಾರ್ಥಿಗಳು ಹಾಗೂ ಶಿಕ್ಷಕರನ್ನೂ



ಒಳಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.

ಎಸ್.ಎಸ್.ಎಲ್.ಸಿ ಪರೀಕ್ಷೆ ವಿದ್ಯಾರ್ಥಿಗಳ ಜೀವನದ ಪ್ರಮುಖ ಹಂತವಾಗಿದ್ದು, ಈ ಸಂದರ್ಭದಲ್ಲಿ ವಿದ್ಯಾರ್ಥಿಗಳಷ್ಟೇ ಅಲ್ಲದೆ ಪೋಷಕರು ಮತ್ತು ಶಿಕ್ಷಕರಿಗೂ ಹೆಚ್ಚಿನ ನಿರೀಕ್ಷೆಗಳು ಇರುತ್ತವೆ. ವಿದ್ಯಾರ್ಥಿಗಳ ಸಾಧನೆ ಶಾಲೆಯ ಕೀರ್ತಿಯನ್ನು ಹೆಚ್ಚಿಸುವುದರಿಂದ ಶಿಕ್ಷಕರು ಹೆಚ್ಚಿನ ಪರಿಶ್ರಮ ವಹಿಸುತ್ತಾರೆ ಎಂದರು.

ಭಾರತವು ವಿಭಿನ್ನತೆಯಲ್ಲಿ ಏಕತೆ ಹೊಂದಿರುವ ರಾಷ್ಟ್ರವಾಗಿದ್ದು, ಹಲವು ಧರ್ಮ, ಜಾತಿ, ಭಾಷೆಗಳಿದ್ದರೂ ನಾವು ಶಾಂತಿಯುತವಾಗಿ ಬದುಕುತ್ತಿದ್ದೇವೆ. ಅನೇಕ ದೇಶಗಳಲ್ಲಿ ಶಾಂತಿ ಮರೀಚಿಕೆಯಾಗಿರುವ ಸಂದರ್ಭದಲ್ಲಿ ಭಾರತದಲ್ಲಿ ನೆಮ್ಮದಿ ಇದೆ ಎಂದು ಹೇಳಿದರು.

ಯೋಧರ ತ್ಯಾಗವೇ ನಮ್ಮ ಸ್ವಾತಂತ್ರ್ಯದ ಆಧಾರವಾಗಿದ್ದು, ಅವರ ಸೇವೆಯನ್ನು ಸದಾ ಸ್ಮರಿಸಬೇಕು. ರೈತ ಮತ್ತು ಯೋಧರಿಲ್ಲದೆ ದೇಶದ ಅಸ್ತಿತ್ವವೇ ಇಲ್ಲ. ಪ್ರತಿಯೊಬ್ಬರೂ ''ದೇಶ ಮೊದಲು'' ಎಂಬ ಮನೋಭಾವ ಬೆಳೆಸಿಕೊಳ್ಳಬೇಕು ಎಂದು ಕರೆ ನೀಡಿದರು.

ತಾಲೂಕು ಅನುದಾನ ರಹಿತ ಶಾಲೆಗಳ ಆಡಳಿತ ಮಂಡಳಿಗಳ ಒಕ್ಕೂಟದ ಅಧ್ಯಕ್ಷ ಮಲ್ನಾಡ್ ಜಾಕೀರ್ ಮಾತನಾಡಿ, ಪ್ರತಿ ವರ್ಷ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಹೆಚ್ಚಿನ ಅಂಕ ಪಡೆದ ಪ್ರತಿಯೊಂದು ಖಾಸಗಿ ಶಾಲೆಯ ವಿದ್ಯಾರ್ಥಿಯನ್ನು ಸನ್ಮಾನಿಸಲಾಗುತ್ತದೆ. ಪ್ರತಿ ವಿಷಯದಲ್ಲಿ ಅತ್ಯುತ್ತಮ ಸಾಧನೆ ಮಾಡಿದ ಶಿಕ್ಷಕರಿಗೆ ''ದ್ರೋಣಾಚಾರ್ಯ ಪ್ರಶಸ್ತಿ'' ನೀಡಿ ನಗದು ಬಹುಮಾನವೂ ನೀಡಲಾಗುತ್ತದೆ ಎಂದರು.

ಈ ಸಂದರ್ಭದಲ್ಲಿ ಒಕ್ಕೂಟದ ಕಾರ್ಯದರ್ಶಿ ಗಿರೀಶ್, ಬಾಳ್ಳುಪೇಟೆ ಬ್ಲಾಸಂ ಶಾಲೆಯ ಸಿದ್ದಣ್ಣ, ಲೋಹಿತ್ ಕೌಡಳ್ಳಿ, ಜಯಪ್ರಕಾಶ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

## ಸೈಬರ್ ಕ್ರೈಂ ಪ್ರಕರಣದಲ್ಲಿ ಬೆಂಗಳೂರು ದೇಶದಲ್ಲೇ ನಂ.1



ಬೆಂಗಳೂರು: ಸೈಬರ್ ಅಪರಾಧ ಪ್ರಕರಣಗಳಲ್ಲಿ ರಾಜಧಾನಿ ಬೆಂಗಳೂರು ನಗರವು ದೇಶದಲ್ಲೇ ಮೊದಲ ಸ್ಥಾನ ಪಡೆದಿದೆ ಎಂದು ರಾಷ್ಟ್ರೀಯ ಅಪರಾಧ ದಾಖಲೆಗಳ ಬ್ಯೂರೊ (ಎನ್‌ಸಿಆರ್‌ಬಿ) ಹೇಳಿದೆ.

ದೇಶದ ವಿವಿಧ ರಾಜ್ಯಗಳಲ್ಲಿ 2024ರಲ್ಲಿ ದಾಖಲಾದ ಸೈಬರ್ ಅಪರಾಧ ಪ್ರಕರಣಗಳ ಸಂಬಂಧ ಎನ್‌ಸಿಆರ್‌ಬಿ ಬಿಡುಗಡೆ ಮಾಡಿರುವ ವರದಿಯಲ್ಲಿಈ ಮಾಹಿತಿ ಬಹಿರಂಗವಾಗಿದೆ. ಈ ವರದಿಯ ಪ್ರಕಾರ, 2024ರಲ್ಲಿ ದೇಶದಲ್ಲಿ ಒಟ್ಟಾರೆ 34,958 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಈ ಪೈಕಿ ಬೆಂಗಳೂರು ನಗರ ಒಂದರಲ್ಲೇ 17,561 ಪ್ರಕರಣಗಳು ವರದಿಯಾಗಿವೆ. ಬೆಂಗಳೂರಿನ ಬಳಿಕ 4,939 ಪ್ರಕರಣಗಳೊಂದಿಗೆ ಮುಂಬಯಿ ಎರಡನೇ ಸ್ಥಾನದಲ್ಲಿದೆ. ನಂತರದ ಸ್ಥಾನದಲ್ಲಿ ಹೈದರಾಬಾದ್ (4,009), ಚೆನ್ನೈ (1,882), ಪುಣೆ (1,504) ಮತ್ತು ಲಖನೌ (1,292) ನಗರಗಳಿವೆ.ಇನ್ನು, ರಾಷ್ಟ್ರ ರಾಜಧಾನಿ ದೆಹಲಿಯಲ್ಲಿ (404). ಕರ್ನಾಟಕ ರಾಜ್ಯದಲ್ಲಿ2024ರಲ್ಲಿ ಒಟ್ಟಾರೆ 21,993 ಸೈಬರ್ ಅಪರಾಧ ಪ್ರಕರಣಗಳು ದಾಖಲಾಗಿವೆ. ಅದೇ ರೀತಿ 2023ರಲ್ಲಿ 21,889 ಸೈಬರ್ ಪ್ರಕರಣಗಳು ದಾಖಲಾಗಿದ್ದವು. ಈ ಅಂಕಿ-ಸಂಖ್ಯೆಗಳನ್ನು ಅವಲೋಕಿಸಿದರೆ ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಸೈಬರ್ ಅಪರಾಧಗಳು ಏರಿಕೆಯಾಗುತ್ತಿರುವುದು ದೃಢಪಟ್ಟಿದೆ.

## ಅಶೋಕ್ ಅನರ್ಹತೆ ಆದೇಶಕ್ಕೆ ಹೈ ತಡೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಪುರಸಭೆ ಸದಸ್ಯ ಎ.ಆರ್. ಅಶೋಕ್ ಅವರನ್ನು ಅನರ್ಹಗೊಳಿಸಿ ಜಿಲ್ಲಾಧಿಕಾರಿ ನ್ಯಾಯಾಲಯ ನೀಡಿದ್ದ ಆದೇಶಕ್ಕೆ ಹೈಕೋರ್ಟ್ ತಡೆ ನೀಡಿದೆ.

ಈ ಹಿನ್ನೆಲೆಯಲ್ಲಿ ಅಶೋಕ್ ಪುರಸಭಾ ಸದಸ್ಯರಾಗಿ ಮುಂದುವರಿಯಲಿದ್ದಾರೆ.

ಕೆಲ ಆಡಳಿತಾತ್ಮಕ ಹಾಗೂ ಕಾನೂನು ಸಂಬಂಧಿತ ವಿಚಾರಗಳ ಹಿನ್ನೆಲೆ ಡಿಸಿ ನ್ಯಾಯಾಲಯ ಅಶೋಕ್ ಅವರ ಸದಸ್ಯತ್ವ ಅನರ್ಹಗೊಳಿಸಿ ಆದೇಶ ಹೊರಡಿಸಿತ್ತು. ಈ ಆದೇಶ ಪ್ರಶ್ನಿಸಿ ಅಶೋಕ್ ಹೈಕೋರ್ಟ್ ಮೊರೆ ಹೋಗಿದ್ದರು.

ವಿಚಾರಣೆ ನಡೆಸಿದ ಹೈಕೋರ್ಟ್, ಡಿಸಿ ಕೋರ್ಟ್ ನೀಡಿದ್ದ ಅನರ್ಹತೆ



ಆದೇಶಕ್ಕೆ ತಾತ್ಕಾಲಿಕ ತಡೆ ನೀಡಿ ಮುಂದಿನ ವಿಚಾರಣೆವರೆಗೆ ಯಥಾಸ್ಥಿತಿ ಕಾಯ್ದುಕೊಳ್ಳುವಂತೆ ಸೂಚಿಸಿದೆ. ಇದರಿಂದ ಅಶೋಕ್ ಪುರಸಭಾ ಸದಸ್ಯರಾಗಿ ಮುಂದುವರಿಯಲು ಅವಕಾಶ ದೊರೆತಿದೆ.

ಹೈಕೋರ್ಟ್ ಆದೇಶ ಹಿನ್ನೆಲೆ ಅಶೋಕ್ ಬೆಂಬಲಿಗರಲ್ಲಿ ಸಂತಸ ಮನೆಮಾಡಿದ್ದು, ಪಟಾಕಿ ಸಿಡಿಸಿ ಸಂಭ್ರಮಿಸಿದರು.

ಬಳಿಕ ಮಾತನಾಡಿದ ಅಶೋಕ್, ಕಾನೂನು ಹೋರಾಟದಲ್ಲಿ ನನಗೆ ಜಯ ಸಿಕ್ಕಿದೆ. ಇದರಿಂದ ಮಾಜಿ ಸಚಿವ ಬಿ.ಶಿವರಾಂ ಬಣಕ್ಕೆ, ತಮ್ಮ ವಿರುದ್ಧ ರಾಜಕೀಯ ಪಿತೂರಿ ನಡೆಸಿದವರಿಗೆ ಮುಖಭಂಗ ಆಗಿದೆ ಎಂದು ಅಶೋಕ್ ಕಿಡಿಕಾರಿದರು.

ದೇವರ ಆಶೀರ್ವಾದದಿಂದ ತಡೆಯಾಜ್ಞೆ ದೊರೆತಿದೆ. ಮುಂದೆಯೂ ನಾನು ಪುರಸಭೆ ಸದಸ್ಯನಾಗಿ ಸಾರ್ವಜನಿಕರ ಕೆಲಸ ಮುಂದುವರಿಸುತ್ತೇನೆ ಎಂದರು.

ನನ್ನ ವಿರುದ್ಧ ಎಷ್ಟೇ ಪ್ರಕರಣ ಹಾಕಿದರೂ ಸತ್ಯ ಮತ್ತು ಒಳ್ಳೆಯತನಕ್ಕೆ ಯಾವತ್ತೂ ಬೆಲೆ ಇರುತ್ತದೆ. ನಾನು ಉತ್ತಮವಾಗಿ ಕೆಲಸ ಮಾಡಿಕೊಂಡು ಬಂದಿದ್ದೇನೆ. ಮುಂದೆಯೂ ಅದೇ ರೀತಿಯಲ್ಲಿ ಸಾರ್ವಜನಿಕ ಸೇವೆ ಮುಂದುವರಿಸುತ್ತೇನೆ ಎಂದು ಅಶೋಕ್ ಹೇಳಿದರು.

## ವೈ.ಡಿ.ಡಿ ಕಾಲೇಜಿನಲ್ಲಿ ವಿಶೇಷ ಉಪನ್ಯಾಸ ಕಾರ್ಯಕ್ರಮ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು : ನಗರದ ವೈ.ಡಿ.ಡಿ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ರಾಜ್ಯಶಾಸ್ತ್ರ ವಿಭಾಗ ಹಾಗೂ ಐಕ್ಯೂಎಸಿ ವತಿಯಿಂದ ಭಾರತದ ಒಕ್ಕೂಟ ವ್ಯವಸ್ಥೆ ಸವಾಲುಗಳು ಮತ್ತು ಬದಲಾವಣೆಗಳು ಎಂಬ ವಿಷಯದ ಮೇಲೆ ವಿಶೇಷ ಉಪನ್ಯಾಸ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ವಿಶೇಷ ಉಪನ್ಯಾಸ ನೀಡಿದ ಹಾಸನ ಮಹಿಳಾ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ಉಪನ್ಯಾಸಕರಾದ ಡಾ. ಮಂಗೇಶ್ ಕುಮಾರ್ ಅವರು, ಭಾರತದ ಸುಭದ್ರ ಒಕ್ಕೂಟ ವ್ಯವಸ್ಥೆ ಮುಂದುವರೆಯಲು ಇರುವ ಪ್ರಮುಖ ಸವಾಲುಗಳು ಹಾಗೂ ಸಮಸ್ಯೆಗಳನ್ನು ಕುರಿತು ವಿಚಾರ ಮಂಡಿಸಿದರು. ಭಾರತದ ಸಂವಿಧಾನವು ಭಾರತವನ್ನು ಒಂದು ಒಕ್ಕೂಟ ರಾಷ್ಟ್ರ ಎಂಬುದಾಗಿ ಸ್ಪಷ್ಟವಾಗಿ ಉಲ್ಲೇಖಿಸುತ್ತದೆ. ಇಂತಹ



ಒಕ್ಕೂಟ ವ್ಯವಸ್ಥೆಯಲ್ಲಿ ಕರ್ನಾಟಕವು ಸೇರಿದಂತೆ ದಕ್ಷಿಣ ಭಾರತದ ರಾಜ್ಯಗಳು ತಮ್ಮ ಅಸ್ಮಿತೆ ಹಾಗೂ ಸೂಕ್ತ ಸ್ಥಾನಮಾನಕ್ಕಾಗಿ ನಿರಂತರವಾಗಿ ಹೋರಾಟ ಮಾಡುವ ಪರಿಸ್ಥಿತಿ ಎದುರಾಗಿದೆ. ಇದನ್ನು ಕೇಂದ್ರ ಸರ್ಕಾರವು ಸೂಕ್ತ ರೀತಿಯಲ್ಲಿ ಪರಿಹರಿಸಲು ಅಗತ್ಯ ಚರ್ಚೆಗಳು, ಮಾತುಕತೆಯನ್ನು ಈ ರಾಜ್ಯಗಳೊಂದಿಗೆ ನಡೆಸುವ ಮೂಲಕ ಪರಿಹರಿಸಬಹುದಾಗಿದೆ ಎಂದರು.

# ವಿಶ್ವ ರೆಡ್ ಕ್ರಾಸ್ ದಿನಾಚರಣೆ : ರಕ್ತದಾನ ಶಿಬಿರ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ರಕ್ತದಾನವು ಅತ್ಯಂತ ಶ್ರೇಷ್ಠವಾದ ಮಾನವೀಯ ಕಾರ್ಯವಾಗಿದ್ದು, ಇದನ್ನು 'ಜೀವದಾನ' ಎಂದು ಕರೆಯಲಾಗುತ್ತದೆ. ರಕ್ತವನ್ನು ಕೃತಕವಾಗಿ ತಯಾರಿಸಲು ಸಾಧ್ಯವಿಲ್ಲದ ಕಾರಣ, ಅಪಘಾತ, ಶಸ್ತ್ರಚಿಕಿತ್ಸೆ ಮತ್ತು ಗಂಭೀರ ಕಾಯಿಲೆಗಳ ಸಂದರ್ಭದಲ್ಲಿ ದಾನಿಗಳ ರಕ್ತವೇ ಅಸಂಖ್ಯಾತ ಜೀವಗಳನ್ನು ಉಳಿಸುತ್ತದೆ ಎಂದು ಪತ್ರಕರ್ತ ಹಾಗೂ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾ ಮಾಜಿ ಗೌರವಾಧ್ಯಕ್ಷ ರವಿ ನಾಕಲಗೂಡು ಅಭಿಪ್ರಾಯಪಟ್ಟರು.




ಅವರು ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ಹಾಸನ ತಾಲ್ಲೂಕು, ಭಾರತ್ ಸ್ಕೌಟ್ಸ್ ಗೈಡ್ಸ್ ಜಿಲ್ಲಾ ಸಂಸ್ಥೆ ಹಾಸನ ಹಾಗೂ ಹಾಸನ ತಾಲ್ಲೂಕು ರೆಡ್ ಕ್ರಾಸ್ ಸಂಸ್ಥೆ ಹಾಸನ, ಜಯಚಾಮರಾಜೇಂದ್ರ ಆಸ್ಪತ್ರೆ ಹಾಸನ ಇವರುಗಳ ಸಂಯುಕ್ತಾಶ್ರಯದಲ್ಲಿ ವಿಶ್ವ ರೆಡ್ ಕ್ರಾಸ್ ದಿನಾಚರಣೆ ನಿಮಿತ್ತ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆಯ ಸಂಸ್ಥಾಪಕ ಅಧ್ಯಕ್ಷ ಕೊಟ್ರೇಶ್ ಎಸ್. ಉಪ್ಪಾರ್ ರಕ್ತ ನೀಡುವುದರ ಮೂಲಕ ಚಾಲನೆ ನೀಡಿದರು. ನಂತರ ರವಿ ನಾಕಲಗೂಡು ಮಾತನಾಡಿ "ರಕ್ತದಾನ ಮಹಾದಾನ". ಪ್ರತಿಯೊಬ್ಬ ಮನುಷ್ಯನ ದೇಹದಲ್ಲಿನ ಅಮೂಲ್ಯವಾದ ದ್ರವ್ಯವೆಂದರೆ ರಕ್ತ. ತುರ್ತು ಸಂದರ್ಭಗಳಲ್ಲಿ, ಪ್ರಾಣಾಪಾಯದಲ್ಲಿದ್ದಾಗ ರಕ್ತಕ್ಕೆ ಪರ್ಯಾಯ ವಸ್ತು ಯಾವುದೂ ಇಲ್ಲ. ಒಬ್ಬ ವ್ಯಕ್ತಿ ಸ್ವಯಂಪ್ರೇರಿತನಾಗಿ, ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ ಇನ್ನೊಬ್ಬರ ಜೀವ ಉಳಿಸಲು ತನ್ನ ರಕ್ತವನ್ನು ನೀಡುವುದೇ ರಕ್ತದಾನ ಎಂದರು.

ಹಾಸನ ಹಿಮ್ಸ್ ಪ್ರಾಂಶುಪಾಲ ಡಾ. ಬಿ.ಸಿ. ರವಿಕುಮಾರ್ ಮಾತನಾಡಿ ರಕ್ತದಾನದ ಅಗತ್ಯವನ್ನು ಪ್ರತಿಯೊಬ್ಬರೂ ಅರಿಯಬೇಕಿದೆ. ಒಂದು ಯುನಿಟ್ ರಕ್ತವು ಮೂರು ಜೀವಗಳನ್ನು ಉಳಿಸಬಲ್ಲದು. ಅಪಘಾತಗಳು, ಪ್ರಸವಪೂರ್ವ ರಕ್ತಸ್ರಾವ, ಶಸ್ತ್ರಚಿಕಿತ್ಸೆಗಳು, ಕ್ಯಾನ್ಸರ್ ಚಿಕಿತ್ಸೆ ಮತ್ತು ಅಕಾಲಿಕ ಶಿಶುಗಳಿಗೆ ರಕ್ತದ ತಕ್ಷಣದ ಅವಶ್ಯಕತೆ ಇರುತ್ತದೆ. ರಕ್ತದ ಕೊರತೆ: ಬ್ಲಡ್ ಬ್ಯಾಂಕ್‌ಗಳಲ್ಲಿ ರಕ್ತದ ಬೇಡಿಕೆ ಹೆಚ್ಚಿದ್ದು, ಪೂರೈಕೆ ಕಡಿಮೆ ಇರುತ್ತದೆ. ಜಾಗತಿಕವಾಗಿ ಪ್ರತಿ 2 ಸೆಕೆಂಡಿಗೆ ರಕ್ತದ ಅಗತ್ಯವಿರುತ್ತದೆ. ರಕ್ತದಾನಿಗಳ ಅರ್ಹತೆ, ವಯಸ್ಸು ಬಹಳ ಮುಖ್ಯ. 18 ರಿಂದ 60 ವರ್?ï.ತೂಕ: 45-50 ಕೆಜಿಗಿಂತ ಹೆಚ್ಚು. ಉತ್ತಮ ಆರೋಗ್ಯ ಹೊಂದಿರಬೇಕು, ಎಚ್.ಐ.ವಿ., ಹೆಪಟೈಟಿಸ್‌ನಂತಹ ಕಾಯಿಲೆಗಳು ಇರಬಾರದು. ಪುರು?ರು ಪ್ರತಿ 3 ತಿಂಗಳಿಗೊಮ್ಮೆ ಮತ್ತು ಮಹಿಳೆಯರು ಪ್ರತಿ 4 ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು. ರಕ್ತದಾನದ ಪ್ರಯೋಜನಗಳನ್ನು ನಾವೆಲ್ಲರೂ ಅರಿಯಬೇಕಿದೆ ಎಂದರು.

ಹಾಸನ ತಾಲ್ಲೂಕು ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ಸಭಾಪತಿ ಸುರೇಶ್ ಗುರೂಜಿ ಮಾತನಾಡಿ ರಕ್ತದಾನ ಮಾಡುವುದರಿಂದ ದೇಹದಲ್ಲಿ ಹೊಸ ರಕ್ತಕೋಶಗಳು ಉತ್ಪತ್ತಿಯಾಗುತ್ತವೆ ಮತ್ತು ಕಬ್ಬಿಣದಂಶ ಸಮತೋಲನದಲ್ಲಿರುತ್ತದೆ. ಉಚಿತ ಆರೋಗ್ಯ ತಪಾಸಣೆ: ರಕ್ತದಾನದ ಮೊದಲು ಹಿಮೋಗ್ಲೋಬಿನ್, ರಕ್ತದೊತ್ತಡ ಮತ್ತು ರಕ್ತದ ಗುಂಪನ್ನು ಪರೀಕ್ಷಿಸಲಾಗುತ್ತದೆ, ಇದು ದಾನಿಯ ಆರೋಗ್ಯದ ಬಗ್ಗೆ ತಿಳಿಸುತ್ತದೆ. ಇನ್ನೊಬ್ಬರ ಜೀವ ಉಳಿಸಿದ ತೃಪ್ತಿ ಮತ್ತು ಮಾನವೀಯತೆಯ ಭಾವನೆ ಮೂಡುತ್ತದೆ ಎಂದರು.

ಮಲೆನಾಡು ತಾಂತ್ರಿಕ ವಿದ್ಯಾಲಯದ ಪ್ರೊ. ಈ. ಮಂಜುನಾಥ್ ಮಾತನಾಡಿ ರಕ್ತದಾನವು ಒಬ್ಬ ವ್ಯಕ್ತಿಯು ಮಾಡಬಹುದಾದ ಅತ್ಯಂತ ನಿಸ್ವಾರ್ಥ ಮತ್ತು ಪರಿಣಾಮಕಾರಿ ಕಾರ್ಯಗಳಲ್ಲಿ ಒಂದಾಗಿದೆ. ಈ ರಕ್ತದಾನ ಪ್ರಬಂಧವು ರಕ್ತದಾನದ ನಿಜವಾದ ಅರ್ಥವನ್ನು ಪರಿಶೋಧಿಸುತ್ತದೆ ಎಂದರು.

ಎ. ವಿ.ಕೆ. ಕಾಲೇಜಿನ ಉಪನ್ಯಾಸಕ ಪ್ರಕಾಶ್ ಮಾತನಾಡಿ ರಕ್ತದಾನ ಎಂದರೆ ಅಗತ್ಯವಿರುವ ರೋಗಿಗಳಿಗೆ ಸಹಾಯ ಮಾಡಲು ಬಳಸಬಹುದಾದ ಸ್ವಯಂಪ್ರೇರಿತ ರಕ್ತದಾನ. ಅಪಘಾತಕ್ಕೊಳಗಾದವರನ್ನು ಉಳಿಸುವುದರಿಂದ ಹಿಡಿದು ಶಸ್ತ್ರಚಿಕಿತ್ಸೆಗೆ ಒಳಗಾಗುವವರಿಗೆ ಅಥವಾ ಮಾರಣಾಂತಿಕ ಕಾಯಿಲೆಗಳ ವಿರುದ್ಧ ಹೋರಾಡುವವರಿಗೆ ಬೆಂಬಲ ನೀಡುವವರೆಗೆ, ದಾನ ಮಾಡಿದ ರಕ್ತವು ಜೀವರಕ್ಷಕವಾಗಿದೆ. ಈ ಸಹಾನುಭೂತಿಯ ಕ್ರಮವನ್ನು ರಕ್ತ ನಿಧಿಗಳ ವೃತ್ತಿಪರರು ನೋಡಿಕೊಳ್ಳುತ್ತಾರೆ, ಇದು ದಾನಿ ಮತ್ತು ಸ್ವೀಕರಿಸುವವರಿಬ್ಬರಿಗೂ ಸುರಕ್ಷತೆ ಮತ್ತು ಗುಣಮಟ್ಟವನ್ನು ಖಾತ್ರಿಗೊಳಿಸುತ್ತದೆ ಎಂದರು.

ಟೈಮ್ಸ್ ಶಿಕ್ಷಣ ಸಮೂಹ ಸಂಸ್ಥೆಗಳ ಕಾರ್ಯದರ್ಶಿ ಡಾ. ಸುರೇಂದ್ರ ಕುಮಾರ್ ಮಾತನಾಡಿ ಪ್ರಪಂಚದ ಪ್ರತಿಯೊಂದು ಮೂಲೆಯಲ್ಲೂ ರಕ್ತದಾನದ ಮಹತ್ವವನ್ನು ಅತಿಯಾಗಿ ಹೇಳಲಾಗದು. ಪ್ರತಿ ವ?ï ಲಕ್ಷಾಂತರ ಜನರು ತುರ್ತು ಪರಿಸ್ಥಿತಿಗಳು ಮತ್ತು ವೈದ್ಯಕೀಯ ಚಿಕಿತ್ಸೆಗಳಲ್ಲಿ ಬದುಕುಳಿಯಲು ದಾನ ಮಾಡಿದ ರಕ್ತವನ್ನು ಅವಲಂಬಿಸಿದ್ದಾರೆ. ಕೇವಲ ಒಂದು ಯೂನಿಟ್ ರಕ್ತವು ಮೂರು ರೋಗಿಗಳಿಗೆ ಸಹಾಯ ಮಾಡುತ್ತದೆ, ಇದು ಪ್ರತಿಯೊಂದು ಕೊಡುಗೆಯ ಶಕ್ತಿಯನ್ನು ತೋರಿಸುತ್ತದೆ ಎಂದರು.




ನಿವೃತ್ತ ನೌಕರರ ಸಂಘದ ಬನವಾಸೆ ರುದ್ರಪ್ಪ ಮಾತನಾಡಿ ಶಸ್ತ್ರಚಿಕಿತ್ಸೆಗಳು ಮತ್ತು ಅಪಘಾತಗಳ ಸಮಯದಲ್ಲಿ ಅಗತ್ಯವಾದ ಬೆಂಬಲವನ್ನು ಒದಗಿಸುತ್ತದೆ. ನಿಯಮಿತ ಮತ್ತು ತುರ್ತು ಆರೈಕೆಗಾಗಿ ಅಗತ್ಯವಾದ ಘಟಕಗಳೊಂದಿಗೆ ರಕ್ತ ನಿಧಿಗಳನ್ನು ಪೂರೈಸುತ್ತದೆ ಎಂದರು.

ಬ್ಯಾಂಕ್ ನೌಕರರ ಸಂಘದ ಮಾಜಿ ಅಧ್ಯಕ್ಷ ಪರಮಶಿವಯ್ಯ ಮಾತನಾಡಿ ರಕ್ತದಾನ ಸಾಮಾಜಿಕ ಜವಾಬ್ದಾರಿ ಮತ್ತು ಸಮುದಾಯದ ಪ್ರಜ್ಞೆಯನ್ನು ಉತ್ತೇಜಿಸುತ್ತದೆ. ಎಲ್ಲಾ ಹಿನ್ನೆಲೆಗಳು ಮತ್ತು ನಂಬಿಕೆಗಳಲ್ಲಿ ಏಕತೆಯನ್ನು ಪ್ರೋತ್ಸಾಹಿಸುತ್ತದೆ. ಸಾರ್ವಜನಿಕ ಆರೋಗ್ಯ ಮತ್ತು ಜೀವಿತಾವಧಿಯನ್ನು ಸುಧಾರಿಸಲು ಕೊಡುಗೆ ನೀಡುತ್ತದೆ ಎಂದರು.

ಆರೋಗ್ಯ ಇಲಾಖೆಯ ಪ್ರಯೋಗಾಲಯದ ಮುಖ್ಯಸ್ಥ ಶಿವಸ್ವಾಮಿ ಮಾತನಾಡಿ ನಿಯಮಿತವಾಗಿ ರಕ್ತದಾನ ಮಾಡುವುದರಿಂದ ಇತರರಿಗೆ ಸಹಾಯ ಮಾಡುವುದಲ್ಲದೆ, ಹಲವಾರು ಆರೋಗ್ಯ ಪ್ರತಿಫಲಗಳನ್ನು ಸಹ ಅನುಭವಿಸುತ್ತಾರೆ. ಹೆಚ್ಚುವರಿ ಕಬ್ಬಿಣದ ಮಟ್ಟವನ್ನು ನಿರ್ವಹಿಸುವ ಮೂಲಕ ಹೃದಯ ಕಾಯಿಲೆಯ ಅಪಾಯವನ್ನು ಕಡಿಮೆ ಮಾಡುತ್ತದೆ. ಹೆಚ್ಚಿನ ಕಬ್ಬಿಣದ ಅಂಶದಿಂದ ಉಂಟಾಗುವ ಕೆಲವು ಕ್ಯಾನ್ಸರ್ ಅಪಾಯಗಳನ್ನು ಕಡಿಮೆ ಮಾಡಲು ಸಹಾಯ ಮಾಡಬಹುದು. ಕ್ಯಾಲೊರಿ ಸುಡುವಿಕೆಗೆ ಸಹಾಯ ಮಾಡುತ್ತದೆ - ಪ್ರತಿ ದಾನವು 650 ಕ್ಯಾಲೊರಿಗಳನ್ನು ಸುಡಬಹುದು. ಪ್ರತಿ ದೇಣಿಗೆಯಲ್ಲೂ ಮಿನಿ-ಆರೋಗ್ಯ ತಪಾಸಣೆಯನ್ನು ಒಳಗೊಂಡಿರುತ್ತದೆ. ಇತರರಿಗೆ ಸಹಾಯ ಮಾಡುವಲ್ಲಿ ತೃಪ್ತಿ ಮತ್ತು ಹೆಮ್ಮೆಯ ಭಾವನೆಯನ್ನು ಸೃಷ್ಟಿಸುತ್ತದೆ ಎಂದರು.

ಈ ಸಂದರ್ಭದಲ್ಲಿ ಕೇಂದ್ರ ಕನ್ನಡ ಸಾಹಿತ್ಯ ವೇದಿಕೆ ತಾಲ್ಲೂಕು ಅಧ್ಯಕ್ಷೆ ಕೆ.ಸಿ.ಗೀತಾ, ಭಾರತ್ ಸ್ಕೌಟ್ಸ್ ಜಿಲ್ಲಾ ಉಪಾಧ್ಯಕ್ಷೆ ಎಂ.ಬಿ.ಗಿರಿಜಾಂಬಿಕ, ಜಿಲ್ಲಾ ಗೈಡ್ ಆಯುಕ್ತೆ ಜಯರಮೇಶ್, ರಾಜ್ಯ ಸಹಾಯಕ ಸಂಘಟನಾ ಆಯುಕ್ತೆ ಎಚ್.ಎಂ. ಪ್ರಿಯಾಂಕ, ಹಿರಿಯ ಗೈಡರ್ ಎಚ್.ಜಿ.ಕಾಂಚನಮಾಲ, ಏಕಲವ್ಯ ರೋವರ್ಸ್ ಲೀಡರ್ ಆರ್.ಜಿ.ಗಿರೀಶ್ ಮುಂತಾದವರು ಉಪಸ್ಥಿತರಿದ್ದರು.

ಈ ಸಂದರ್ಭದಲ್ಲಿ ರೋವರ್ ಭೂಮೇಶ್, ಸಾಹಿತಿ ಎಚ್.ಎಸ್.ಪ್ರತಿಮಾ ಹಾಸನ್, ಗೈಡ್ ಶಿಕ್ಷಕಿಯರಾದ ವಾಣಿ ಪ್ರಕಾಶ್, ರಾಣಿ ಚರಾಶ್ರೀ, ಪುಷ್ಪ ಮಗ್ಗೆ, ರೇಣುಕಾ ಮೋಹನ್, ಎಚ್.ಎಂ. ಪ್ರಿಯಾಂಕ, ಸ್ಕೌಟ್ ಮಾಸ್ಟರ್ ಮಲ್ಲೇಶ್, ರೋವರ್ ಭೂಮೇಶ್ ಸೇರಿದಂತೆ 20 ಹೆಚ್ಚು ಸ್ಕೌಟ್ ಗೈಡ್ ಶಿಕ್ಷಕರು ಹಾಗೂ ರೋವರ್ಸ್ ರೇಂಜರ್ಸ್ ರಕ್ತದಾನ ಮಾಡಿದರು.

# ಸುಭಾಶ್‌ಕುಮಾರ್‌ಗೆ ಮುಖ್ಯಮಂತ್ರಿ ಪದಕದ ಗರಿ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಜಿಲ್ಲೆಯ ಮಲೆನಾಡು ಭಾಗದಲ್ಲಿ ಕಾಡಾನೆಗಳ ಹಾವಳಿ ತಡೆಗಟ್ಟುವಲ್ಲಿ ಮತ್ತು ಮಾನವ-ಆನೆ ಸಂಘರ್ಷವನ್ನು ಸಮರ್ಥವಾಗಿ ನಿಭಾಯಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುವ ಹಾಸನ ಉಪವಲಯದ ಆನೆ ಕಾರ್ಯಪಡೆ ವಲಯ ಅರಣ್ಯಾಧಿಕಾರಿ ಹಾಗೂ ಮೋಜಣಿದಾರ ಸುಭಾಶ್‌ಕುಮಾರ್ ಬಿ.ಕೆ. ಅವರಿಗೆ ಪ್ರತಿಷ್ಠಿತ 'ಮುಖ್ಯಮಂತ್ರಿ ಪದಕ' ಲಭಿಸಿದೆ.

ಬೆಂಗಳೂರಿನಲ್ಲಿ ನಡೆದ ಸಮಾರಂಭದಲ್ಲಿ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸುಭಾಶ್‌ಕುಮಾರ್ ಅವರಿಗೆ ಪದಕ ನೀಡಿ ಗೌರವಿಸಿದರು. ಈ ಗೌರವದ ಬೆನ್ನಲ್ಲೇ, ಹಾಸನದ ಬೂವನಹಳ್ಳಿಯಲ್ಲಿ ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಅವರು ಸಹ ಸುಭಾಶ್‌ಕುಮಾರ್ ಅವರ ಸೇವೆಯನ್ನು ಶ್ಲಾಘಿಸಿ ಸನ್ಮಾನಿಸಿರುವುದು ವಿಶೇಷ.

ಸುಭಾಶ್‌ಕುಮಾರ್ ಅವರ ಈ ಸಾಧನೆಯ ಹಿಂದೆ ಹಗಲಿರುಳು ನಡೆಸಿದ ಶ್ರಮವಿದೆ. ಸಿಬ್ಬಂದಿ ಕೊರತೆಯ ನಡುವೆಯೂ ಅವರು ಜಿಲ್ಲೆಯಲ್ಲಿ ಈ ಕೆಳಗಿನ ಪ್ರಮುಖ ಕಾರ್ಯಗಳನ್ನು ನಿರ್ವಹಿಸಿದ್ದಾರೆ:

ಜಿಲ್ಲೆಯಲ್ಲಿ ನಡೆದ ಒಟ್ಟು ಒಂಭತ್ತು ಕಾಡಾನೆಗಳ ಸೆರೆ ಕಾರ್ಯಾಚರಣೆಯಲ್ಲಿ ಆನೆಗಳನ್ನು ಗುರುತಿಸುವುದು, ಟ್ರ್ಯಾಕಿಂಗ್ ಮಾಡುವುದು ಮತ್ತು ಲಾಜಿಸ್ಟಿಕ್ಸ್ ನಿರ್ವಹಣೆಯಲ್ಲಿ ಅವರು ಸಕ್ರಿಯವಾಗಿ ತೊಡಗಿಸಿಕೊಂಡಿದ್ದರು.

ಕಾಡಾನೆಗಳ ಚಲನವಲನ ತಿಳಿಸುವ ರಾಜ್ಯದ ಮೊದಲ ವೆಬ್‌ಸೈಟ್ www.aaneellli.com ಅಭಿವೃದ್ಧಿಗೆ ಅಗತ್ಯವಾದ ನಿರ್ಣಾಯಕ ಕ್ಷೇತ್ರ ಮಾಹಿತಿಗಳನ್ನು ಒದಗಿಸುವ ಮೂಲಕ ತಂತ್ರಜ್ಞಾನ ಬಳಕೆಗೆ ಒತ್ತು ನೀಡಿದ್ದಾರೆ.

ನಿಯಂತ್ರಣ ಕೊಠಡಿ ನಿರ್ವಹಣೆ: ಹಾಸನ ಅರಣ್ಯ ನಿಯಂತ್ರಣ ಕೊಠಡಿಯನ್ನು ಶಿಸ್ತುಬದ್ಧವಾಗಿ ಮುನ್ನಡೆಸಿ, ಸಾರ್ವಜನಿಕರ ದೂರುಗಳಿಗೆ ಸ್ಪಂದಿಸುವ 'ಪ್ರತಿಕ್ರಿಯೆ ಸಮಯ'ವನ್ನು (ಖesಠಿoಟಿse ಖime) ಗಣನೀಯವಾಗಿ ಕಡಿಮೆ ಮಾಡಿದ್ದಾರೆ.

ಕಾಡಾನೆಗಳ ಬಗ್ಗೆ ತಪ್ಪು ಮಾಹಿತಿ ಹರಡುವ ಮತ್ತು ಆನೆಗಳನ್ನು ಕೆಣಕುವ ರೀಲ್ಸ್‌ಗಳನ್ನು ಟ್ರ್ಯಾಕ್ ಮಾಡುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಶ್ರಮಿಸಿದ್ದಾರೆ.

ಅಪಾಯಕಾರಿ ಹಾಟ್‌ಸ್ಪಾಟ್‌ಗಳನ್ನು ಗುರುತಿಸುವಲ್ಲಿ ಯಶಸ್ವಿಯಾಗಿರುವ ಇವರು, ಬೆಳೆ ನಷ್ಟದ ಸಂದರ್ಭದಲ್ಲಿ ರೈತರ ಪ್ರತಿಭಟನೆಗಳನ್ನು ಶಾಂತಿಯುತವಾಗಿ ನಿಭಾಯಿಸುವಲ್ಲಿ ಚತುರತೆ ತೋರಿದ್ದಾರೆ. ಅಧಿಕಾರಿಗಳು ಮತ್ತು ಸಾರ್ವಜನಿಕರ ನಡುವೆ ಕೊಂಡಿಯಾಗಿ ಕೆಲಸ ಮಾಡಿ, ಕುಂದುಕೊರತೆಗಳ ಪರಿಹಾರಕ್ಕೆ ಪ್ರಾಮಾಣಿಕ ಪ್ರಯತ್ನ ನಡೆಸಿದ್ದಾರೆ.

ಅರಣ್ಯ ಇಲಾಖೆಯ ಈ ಅಧಿಕಾರಿಯ ಸಾಧನೆಗೆ ಈಗ ನಾಡಿನಾದ್ಯಂತ ಶ್ಲಾಘನೆ ವ್ಯಕ್ತವಾಗುತ್ತಿದೆ.

# ಅರಸೀಕೆರೆ: ಗಮನ ಸೆಳೆದ ಸ್ವಚ್ಛತಾ ಜಾಥಾ




ಅರಸೀಕೆರೆ: ನಗರದ ಸ್ವಚ್ಛತೆ ಕಾಪಾಡುವುದು ಪೌರ ಕಾರ್ಮಿಕರ ಕರ್ತವ್ಯ ಮಾತ್ರವಲ್ಲ, ನಮ್ಮೆಲ್ಲರ ಜವಾಬ್ದಾರಿ ಕೂಡ ಎಂದು ರಾಜ್ಯ ಗೃಹ ಮಂಡಳಿ ಅಧ್ಯಕ್ಷರೂ ಆದ ಶಾಸಕ ಕೆ.ಎಂ ಶಿವಲಿಂಗೇಗೌಡ ಹೇಳಿದರು.

ಸ್ವಚ್ಛ ಭಾರತ್ ಮಿಷನ್ 2.0 ಯೋಜನೆ ಅಡಿ ನಗರಸಭೆ ವತಿಯಿಂದ ಪ್ಲಾಸ್ಟಿಕ್ ಬಳಕೆ ನಿಷೇಧ ಹಸಿ ಮತ್ತು ಒಣ ಕಸ ವಿಂಗಡಣೆ ನಗರದ ಸ್ವಚ್ಛತೆ ಕಾಪಾಡುವಲ್ಲಿ ಜನತೆಯ ಸಹಕಾರ ಕುರಿತು ಆಯೋಜಿಸಿದ್ದ ಸ್ವಚ್ಛತಾ ರ್‍ಯಾಲಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು.

ನಗರದ ಸ್ವಚ್ಛತೆ ಕಾಪಾಡಲು ಪೌರ ಕಾರ್ಮಿಕರು ಹಗಲು ಇರುಳು ಎನ್ನದೇ ಶ್ರಮಿಸುತ್ತಿದ್ದು, ಅವರ ಸೇವೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಆದರೆ ಸಾರ್ವಜನಿಕರು ತಮ್ಮ ಜವಾಬ್ದಾರಿ ಅರಿಯದೆ ಸಾರ್ವಜನಿಕ ಸ್ಥಳಗಳಲ್ಲಿ ಅಸ್ವಚ್ಛತೆ ಕಾರಣವಾಗುತ್ತಿರುವುದು ನಾಗರೀಕ ಸಮಾಜದ ನಡವಳಿಕೆ ಎಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅಲ್ಲದೆ ನಗರ ವ್ಯಾಪ್ತಿಯಲ್ಲಿ ಖಾಸಗಿಯವರು ಹೊಂದಿರುವ ನಿವೇಶನಗಳು ಹಾಗೂ ನೂತನವಾಗಿ ಅಭಿವೃದ್ಧಿಪಡಿಸಿರುವ ಲೇಔಟ್‌ಗಳಲ್ಲಿ ಗಿಡಗಂಟೆಗಳು ಬೆಳೆದು ಕಾಡು ಪ್ರಾಣಿಗಳಿಗೆ ಆಶ್ರಯ ತಾಣವಾಗುತ್ತಿದೆ. ಈ ಬಗ್ಗೆ ನಗರಸಭೆ ಅಧಿಕಾರಿಗಳು ಸಂಬಂಧಪಟ್ಟ ನಿವೇಶನದ ಮಾಲೀಕರಿಗೆ ಸೂಚನೆ ನೀಡುವಂತೆ ಸೂಚಿಸಿದರು.

ಅದೇ ರೀತಿ ನಗರದ ಮೂಲಕ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 206 ಟಿ.ಎಚ್ ರಸ್ತೆಯ ಎರಡು ಬದಿ ಅನಧಿಕೃತವಾಗಿ ಇಟ್ಟಿರುವ ಫುಟ್ ಪಾತ್ ಅಂಗಡಿಗಳಿಂದ ಫುಟ್ಟು ಬಾತ್ ಮೇಲೆ ಸಂಚರಿಸುವ ಪಾದಚಾರಿಗಳಿಗೆ ತೊಂದರೆ ಆಗುತ್ತಿದೆ ಎಂಬ ದೂರು ನಿತ್ಯ ಕೇಳಿ ಬರುತ್ತಿದೆ. ಅಲ್ಲದೆ ನಗರದ ಸೌಂದರ್ಯ ದೃಷ್ಟಿಯಿಂದಲೂ ಈ ಬೆಳವಣಿಗೆ ಸರಿ ಕಾಣುತ್ತಿಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಫುಟ್‌ಪಾತ್ ವ್ಯಾಪಾರಿಗಳಿಗೆ ಜೀವನದ ಭದ್ರತೆ ಒದಗಿಸುವುದು ನಮ್ಮೆಲ್ಲರ ಕರ್ತವ್ಯವಾಗಿದೆ. ಹಾಗಾಗಿ ಶೀಘ್ರದಲ್ಲೇ ಫುಟ್‌ಪಾತ್ ವ್ಯಾಪಾರಿಗಳಿಗೆ ಸೂಕ್ತ ಮಳಿಗೆಗಳನ್ನು ನಿರ್ಮಿಸಿ ಕೊಡಲಾಗುವುದು.

ಅಲ್ಲಿಯವರೆಗೂ ಫುಟ್ ಪಾತ್ ಮೇಲೆ ಅನಧಿಕೃತವಾಗಿ ಅಂಗಡಿ ಮುಂಗಟ್ಟುಗಳನ್ನು ಇಟ್ಟುಕೊಳ್ಳುತ್ತಿರುವ ಬಗ್ಗೆ ನಗರಸಭೆ ಅಧಿಕಾರಿಗಳು ಗಮನಹರಿಸಿ ಕ್ರಮ ಕೈಗೊಳ್ಳುವಂತೆ ತಾಕಿತು ಮಾಡಿದರು. ನಗರಸಭೆ ಪೌರಾಯುಕ್ತ ಕೃಷ್ಣಮೂರ್ತಿ ಮಾತನಾಡಿ, ನಗರ ದಿನದಿಂದ ದಿನಕ್ಕೆ ವಿಸ್ತಾರವಾಗಿ ಬೆಳೆಯುತ್ತಿರುವುದರ ಜತೆಗೆ ಜನಸಂಖ್ಯೆ ಕೂಡ ಏರುತಿದೆ. ಇದಕ್ಕೆ ಅನುಗುಣವಾಗಿ ನಗರಸಭೆ ವತಿಯಿಂದ ಕಾರ್ಯನಿರ್ವಹಿಸಲು ಪೌರ ಕಾರ್ಮಿಕರ ಕೊರತೆ ಇದ್ದರೂ ಸಹ ಇರುವ ಪೌರಕಾರ್ಮಿಕರನ್ನು ಬಳಸಿಕೊಂಡು ನಗರದ ಸ್ವಚ್ಛತೆ ಕಾಪಾಡುವಲ್ಲಿ ನಗರಸಭೆ ಶ್ರಮಿಸುತ್ತಿದೆ ಎಂದರು.

# ಬಸವಣ್ಣನ ವಚನ ಸಂದೇಶ ಪಾಲಿಸಲು ಕರೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೇಲೂರು: ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ತಾಲ್ಲೂಕು ಘಟಕ ಯುವಘಟಕ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಮಹಿಳಾ ಘಟಕ ಸಂಯುಕ್ತ ಆಶ್ರಯದಲ್ಲಿ ಜಗಜ್ಯೋತಿ ಬಸವೇಶ್ವರರ ಜಯಂತಿ ಹಾಗೂ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷ ಸಚಿವ ಈಶ್ವರ ಬಿ.ಖಂಡ್ರೆ ಅವರಿಗೆ ಅದ್ದೂರಿ ಅಭಿನಂದನಾ ಕಾರ್ಯಕ್ರಮ ಆಯೋಜಿಸಲಾಗಿತ್ತು.



ಕಾರ್ಯಕ್ರಮದಲ್ಲಿ ಬಸವೇಶ್ವರರ ತತ್ವ, ಸಮಾನತೆ, ಮಾನವೀಯತೆ ಹಾಗೂ ಸಾಮಾಜಿಕ ನ್ಯಾಯದ ಸಂದೇಶ ಸಾರುವ ಕುರಿತು ವಿಶೇಷ ಉಪನ್ಯಾಸ ನಡೆದವು.

ಈ ವೇಳೆ ಮಾತನಾಡಿದ ಖಂಡ್ರೆ, ಮಹಾಪುರುಷರ ಜಯಂತಿ ಆಚರಿಸುವ ಉದ್ದೇಶ ಅವರ ತತ್ವ, ಆದರ್ಶ ಮತ್ತು ಸಮಾಜಕ್ಕೆ ನೀಡಿದ ಕೊಡುಗೆಗಳನ್ನು ಅರಿತು ಜೀವನದಲ್ಲಿ ಅಳವಡಿಸಿಕೊಳ್ಳುವುದಾಗಿದೆ ಎಂದು ಹೇಳಿದರು. 893 ವರ್ಷಗಳ ಹಿಂದೆ ಸಮಾಜದಲ್ಲಿ ಅಂಧಾಕಾರ, ಅಸಮಾನತೆ, ಜಾತೀಯತೆ ಮತ್ತು ಅನ್ಯಾಯ ತುಂಬಿಕೊಂಡಿದ್ದಾಗ ಬಸವಣ್ಣ ಅವರು ಬಸವ ಕಲ್ಯಾಣದಲ್ಲಿ ಸಮಾನತೆಗಾಗಿ ಸಾಮಾಜಿಕ ಕ್ರಾಂತಿ ನಡೆಸಿದರು. ಹೆಣ್ಣು, ಹೊನ್ನು, ಮಣ್ಣು ಮತ್ತು ಅಧಿಕಾರಕ್ಕಾಗಿ ಅನೇಕ ಕ್ರಾಂತಿ ನಡೆದಿದ್ದರೂ, ಸರ್ವ ಸಮಾನತೆಗಾಗಿ ನಡೆದ ಕ್ರಾಂತಿ ಕಲ್ಯಾಣ ಕ್ರಾಂತಿ ಎಂದರು.

ಸಮಾನತೆ, ಸ್ವಾತಂತ್ರ್ಯ, ಕಾಯಕ, ದಾಸೋಹ, ಸೋದರತ್ವ ಹಾಗೂ ಸಹಬಾಳ್ವೆಯ ತತ್ವಗಳ ಆಧಾರದಲ್ಲಿ ವರ್ಣರಹಿತ, ವರ್ಗರಹಿತ ಸಮಾಜ ನಿರ್ಮಾಣವೇ ಬಸವಣ್ಣನವರ ಕನಸಾಗಿತ್ತು. ಜಾತೀಯತೆ, ಅಸ್ಪೃಶ್ಯತೆ ಮತ್ತು ಕಂದಾಚಾರದ ವಿರುದ್ಧ ಅವರು ಹೋರಾಟ ನಡೆಸಿದರು ಎಂದು ಹೇಳಿದರು. ಅನುಭವ ಮಂಟಪ ಇಡೀ ಜಗತ್ತಿನ ಪ್ರಥಮ ಸಂಸತ್ತು ಎಂದು ಬಣ್ಣಿಸಿದ ಅವರು, ಎಲ್ಲಾ ಸಮುದಾಯ ಮತ್ತು ವೃತ್ತಿಯ ಶರಣರಿಗೆ ಅವಕಾಶ ನೀಡಿ ಪ್ರಜಾಪ್ರಭುತ್ವದ ಪರಿಕಲ್ಪನೆಯನ್ನು ಬಸವಣ್ಣನವರು ಬಹಳ ಹಿಂದೆಯೇ ಜಾರಿಗೆ ತಂದಿದ್ದರು ಎಂದರು.

ಬಸವಣ್ಣನವರ ಕಾಯಕವೇ ಕೈಲಾಸ ತತ್ವ ಉಲ್ಲೇಖಿಸಿ, ಪ್ರತಿಯೊಬ್ಬರೂ ಪ್ರಾಮಾಣಿಕ ದುಡಿತ ಮಾಡಬೇಕು. ದುಡಿದು ಗಳಿಸಿದ ಸಂಪತ್ತಿನಲ್ಲಿ ಅಗತ್ಯವಿರುವಷ್ಟು ಮಾತ್ರ ಇಟ್ಟುಕೊಂಡು ಉಳಿದುದನ್ನು ಸಮಾಜದ ಹಿತಕ್ಕಾಗಿ ವಿನಿಯೋಗಿಸಿದರೆ ಬಡತನ ನಿರ್ಮೂಲನೆ ಸಾಧ್ಯ ಎಂದು ಹೇಳಿದರು.

ನಂತರ ಮಾತನಾಡಿದ ಸ್ಥಳೀಯ ಶಾಸಕ ಹೆಚ್.ಕೆ.ಸುರೇಶ್ ಬಸವ ತತ್ವಗಳು ಸಮಾಜಕ್ಕೆ ದಾರಿದೀಪ ನಮ್ಮೆಲ್ಲರಿಗೂ, ಬೇಲೂರಿನಲ್ಲಿ ಪ್ರತಿವರ್ಷ ಬಸವೇಶ್ವರರ ಜಯಂತಿಯನ್ನು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸುತ್ತಿರುವ ಆಯೋಜಕರು ಹಾಗೂ ಸಮಾಜದ ಮುಖಂಡರನ್ನು ಅಭಿನಂದಿಸಿದರು.

ಬಸವಣ್ಣನವರ ಕಾಯಕವೇ ಕೈಲಾಸ ತತ್ವವು ಇಂದಿಗೂ ಸಮಾಜಕ್ಕೆ ದಾರಿದೀಪವಾಗಿದ್ದು, ಇವನಾರವ ಇವನಾರವ ಎನ್ನದೆ, ಇವ ನಮ್ಮವ ಎಂಬ ಸಂದೇಶದ ಮೂಲಕ ಜಾತಿ-ಧರ್ಮಗಳ ಗೋಡೆಗಳನ್ನು ಕೆಡವಿ ಎಲ್ಲರನ್ನೂ ಸಮಾನವಾಗಿ ಕಂಡ ವಿಶ್ವಗುರು ಬಸವಣ್ಣನವರು ಮಾನವತೆಯ ಪ್ರತೀಕ ಎಂದು ಹೇಳಿದರು.

ಪುಷ್ಪಗಿರಿ ಮಹಾ ಸಂಸ್ಥಾನದ ಸೋಮಶೇಖರ ಸ್ವಾಮೀಜಿ ಮಾತನಾಡಿ, ಬಸವಣ್ಣನವರ ವಚನ ವಿಚಾರ ವೇದಿಕೆಗೆ ಸೀಮಿತವಾಗಬಾರದು. ಆಚರಣೆಗೆ ತರಲು ವೇದಿಕೆಗಳು ವಿಫಲವಾಗುತ್ತಿದೆ, ನಾವು ಬೇರೆಯವರನ್ನು ದೂಷಿಸುವ ಮೊದಲು ನಾವು ಸರಿಯಾಗಿದ್ದೇವೆಯೇ ಎಂದು ಅರಿಯಬೇಕು, ಬಸವಣ್ಣನವರ ವಿಷಯಗಳನ್ನು ಅಧ್ಯಯನ ಮಾಡುವ ಕೆಲಸ ಮಾಡಬೇಕು ಎಂದರು.

ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ರಾಷ್ಟ್ರೀಯ ಅಧ್ಯಕ್ಷೆ ವೀಣಾ ಕಾಶಪ್ಪನವರ್ ಮಾತನಾಡಿದರು.

ಅರಕಲಗೂಡು ದೊಡ್ಡಮಠದ ಪೂಜ್ಯ ಶ್ರೀಮಲ್ಲಿಕಾರ್ಜುನ ಮಹಾಸ್ವಾಮಿ,

ಅಖಿಲ ಭಾರತ ವೀರಶೈವ ಲಿಂಗಾಯತ ರಾಜ್ಯ ಪ್ರಧಾನ ಕಾರ್ಯದರ್ಶಿ ಸಾದರನಹಳ್ಳಿ ನಟರಾಜ್, ರಾಷ್ಟ್ರೀಯ ಸದಸ್ಯ ಗ್ರ್ಯಾನೈಟ್ ರಾಜಶೇಖರ್, ರಾಷ್ಟ್ರೀಯ ಉಪಾಧ್ಯಕ್ಷೆ ಬಿ.ಕೆ.ಚಂದ್ರಕಲಾ, ಜಿಲ್ಲಾ ಅಧ್ಯಕ್ಷ ನವಿಲೆ ಪರಮೇಶ್, ಮಾಜಿ ಶಾಸಕ ಕೆ.ಎಸ್.ಲಿಂಗೇಶ್, ತಾಲ್ಲೂಕು ಅಧ್ಯಕ್ಷ ಎ.ಎಸ್.ಬಸವರಾಜು, ಮಹಿಳಾ ಅಧ್ಯಕ್ಷೆ ಇಂಪು ಸಂತೋಷ್ ಮೊದಲಾದವರಿದ್ದರು.

# ಉತ್ತಮ ಆರೋಗ್ಯಕ್ಕೆ ಶುದ್ಧ ನೀರು ಅಗತ್ಯ



ಚನ್ನರಾಯಪಟ್ಟಣ: ಆರೋಗ್ಯವನ್ನು ಉತ್ತಮವಾಗಿರಿಸಿಕೊಳ್ಳಲು ಶುದ್ಧ ಕುಡಿಯುವ ನೀರು ಬಳಕೆ ಅತಿಮುಖ್ಯ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ಪಟ್ಟಣದ ಟಿಎಪಿಸಿಎಂಎಸ್ ಆವರಣದಲ್ಲಿ 7.30 ಲಕ್ಷ ರೂ. ವೆಚ್ಚದಲ್ಲಿ ನಿರ್ಮಿಸಿರುವ ಶುದ್ಧ ಕುಡಿಯುವ ನೀರಿನ ಘಟಕವನ್ನು ಉದ್ಘಾಟಿಸಿ ಮಾತನಾಡಿ, ಸಕಲ ಜೀವರಾಶಿಗಳಿಗೂ ನೀರು ಅತ್ಯಾವಶ್ಯಕ ಎಂದರು.

ಸ್ಕ್ಯಾನರ್ ಮೂಲಕ 20 ಲೀಟರ್ ನೀರು ಪಡೆಯಲು ವ್ಯವಸ್ಥೆ ಮಾಡಲಾಗಿದೆ. ಏತನೀರಾವರಿ ಯೋಜನೆಯಡಿ ತಾಲ್ಲೂಕು ವ್ಯಾಪ್ತಿಯ 200 ಕ್ಕೂ ಹೆಚ್ಚು ಕೆರೆ ಕಟ್ಟೆಗಳನ್ನು ತುಂಬಿಸಲಾಗುತ್ತಿದ್ದು ವ್ಯಾಪ್ತಿಯಲ್ಲಿ ಅಂತರ್ಜಲವು ಚೇತರಿಕೆ ಕಂಡಿದೆ. ಇದರಿಂದ ಕೊಳವೆ ಬಾವಿಗಳಲ್ಲಿ ವ್ಯಾಪಕವಾಗಿ ನೀರು ಲಭ್ಯವಾಗುತ್ತಿದ್ದು ರೈತರ ಕೃಷಿ ಚಟುವಟಿಕೆಗೆ ಹೆಚ್ಚಿನ ಅನುಕೂಲವಾಗುತ್ತಿದೆ ಎಂದು ತಿಳಿಸಿದರು.

# 'ಸ್ಕಂದ ಸ್ಕ್ಯಾನಿಂಗ್ ಸೆಂಟರ್' ಅವ್ಯವಸ್ಥೆ ವಿರುದ್ಧ ಆಕ್ರೋಶ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಪಟ್ಟಣದ ಟೋಲ್ ಗೇಟ್ ಸಮೀಪ ಕಾರ್ಯನಿರ್ವಹಿಸುತ್ತಿರುವ ''ಸ್ಕಂದ ಸ್ಕ್ಯಾನಿಂಗ್ ಸೆಂಟರ್''ನ ಬೇಜವಾಬ್ದಾರಿತನದಿಂದ ಮಹಿಳೆಯೊಬ್ಬರು ತೀವ್ರ ಅಸ್ವಸ್ಥಗೊಂಡಿರುವ ಘಟನೆ ಬೆಳಕಿಗೆ ಬಂದಿದೆ.

ತಾಲೂಕಿನ ಮಠಸಾಗರ ಗ್ರಾಮದ ಹಸೈನಾರ್ ಹಾಜಿ ಅವರ ಪತ್ನಿ ಸಂಶಿಯಾ ಎಂಬುವವರು ಜ್ವರ ಹಾಗೂ ಹೊಟ್ಟೆನೋವಿನಿಂದ ಬಳಲುತ್ತಿದ್ದು, ಗುರುವಾರ ಸಕಲೇಶಪುರ ಸರ್ಕಾರಿ ಆಸ್ಪತ್ರೆಗೆ ಭೇಟಿ ನೀಡಿ ಚಿಕಿತ್ಸೆ ಪಡೆದಿದ್ದರು. ಈ ವೇಳೆ ವೈದ್ಯರು ಸ್ಕ್ಯಾನಿಂಗ್ ಮಾಡುವಂತೆ ಸೂಚಿಸಿದ್ದು, ಅವರನ್ನು ಪಟ್ಟಣದ ಟೋಲ್ ಗೇಟ್ ಸಮೀಪದ ಸ್ಕಂದ ಸ್ಕ್ಯಾನಿಂಗ್ ಸೆಂಟರ್‌ಗೆ ಕಳುಹಿಸಲಾಗಿತ್ತು.




ಸ್ಕ್ಯಾನಿಂಗ್ ಮಾಡಿದ ಬಳಿಕ ಕೇಂದ್ರದ ಸಿಬ್ಬಂದಿ ನೀಡಿದ ವರದಿಯನ್ನು ವೈದ್ಯರಿಗೆ ತೋರಿಸಿದಾಗ, ಅದರ ಆಧಾರದ ಮೇಲೆ ಔಷಧಿ ನೀಡಲಾಗಿತ್ತು. ಆದರೆ ಔಷಧಿ ಸೇವಿಸಿದ ಬಳಿಕವೂ ಮಹಿಳೆಯ ಆರೋಗ್ಯದಲ್ಲಿ ಯಾವುದೇ ಸುಧಾರಣೆ ಕಾಣಿಸದೇ, ಮತ್ತಷ್ಟು ಅಸ್ವಸ್ಥಗೊಂಡು ನಿಶಕ್ತರಾಗಿದ್ದಾರೆ ಎಂದು ಕುಟುಂಬದವರು ತಿಳಿಸಿದ್ದಾರೆ.

ಈ ನಡುವೆ ಶುಕ್ರವಾರ ಸ್ಕಂದ ಸ್ಕ್ಯಾನಿಂಗ್ ಸೆಂಟರ್ ಸಿಬ್ಬಂದಿ ದೂರವಾಣಿ ಮೂಲಕ ಸಂಪರ್ಕಿಸಿ ''ನಿಮ್ಮ ರಿಪೋರ್ಟ್ ಬದಲಾಗಿ ವೈಶಾಲಿ ಎಂಬುವವರ ವರದಿ ನಿಮ್ಮ ಕೈ ಸೇರಿದೆ, ಬಂದು ಹೊಸ ವರದಿ ಪಡೆದುಕೊಳ್ಳಿ'' ಎಂದು ತಿಳಿಸಿದ್ದಾರೆ ಎನ್ನಲಾಗಿದೆ. ಇದರಿಂದ ಕೇಂದ್ರದ ನಿರ್ಲಕ್ಷ್ಯ ಹಾಗೂ ಬೇಜವಾಬ್ದಾರಿತನ ಬಹಿರಂಗವಾಗಿದ್ದು, ತಪ್ಪಾದ ವರದಿ ನೀಡಿದ ಪರಿಣಾಮ ರೋಗಿಯ ಆರೋಗ್ಯ ಮತ್ತಷ್ಟು ಹದಗೆಟ್ಟಿದೆ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ.

ಈ ಬಗ್ಗೆ ಪ್ರಶ್ನಿಸಿದಾಗ ಕೇಂದ್ರದ ಸಿಬ್ಬಂದಿ ''ಇಂತಹದ್ದು ಕೆಲಮೊಮ್ಮೆ ಆಗುತ್ತದೆ, ಬೇಕಾದರೆ ಹೊಸ ರಿಪೋರ್ಟ್ ತೆಗೆದುಕೊಂಡು ಹೋಗಿ, ಇಲ್ಲವಾದರೆ ಬಿಡಿ'' ಎಂದು ನಿರ್ಲಕ್ಷ್ಯವಾಗಿ ಉತ್ತರಿಸಿ, ರೋಗಿ ಹಾಗೂ ಅವರ ಪತಿಯನ್ನು ಅವಾಚ್ಯ ಶಬ್ದಗಳಿಂದ ನಿಂದಿಸಿದ್ದಾರೆ ಎಂದು ಆರೋಪಿಸಲಾಗಿದೆ.

ಈ ಕುರಿತು ರೋಗಿಯ ಪತಿ ಹಸನ್ ಹಾಜಿ ಮಾತನಾಡಿ, ನಾವು ಅನಕ್ಷರಸ್ಥರು. ವೈದ್ಯಕೀಯ ವರದಿಗಳ ಬಗ್ಗೆ ಅರಿವು ಇಲ್ಲ. ಆದರೆ ಸ್ಕ್ಯಾನಿಂಗ್ ಕೇಂದ್ರದ ಸಿಬ್ಬಂದಿ ತಮ್ಮ ತಪ್ಪನ್ನು ಒಪ್ಪಿಕೊಳ್ಳದೆ ನಮ್ಮ ಮೇಲೆಯೇ ದರ್ಪ ತೋರಿಸುತ್ತಿದ್ದಾರೆ. ಇಂತಹ ನಿರ್ಲಕ್ಷ್ಯದಿಂದ ಜೀವಕ್ಕೆ ಅಪಾಯ ಉಂಟಾಗಬಹುದು. ಸಂಬಂಧಪಟ್ಟ ಆರೋಗ್ಯ ಇಲಾಖೆ ಅಧಿಕಾರಿಗಳು ಕೂಡಲೇ ತನಿಖೆ ನಡೆಸಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು.

## ಸರ್ಕಾರಿ ಆಸ್ಪತ್ರೆಯ ಸ್ಕ್ಯಾನಿಂಗ್ ಯಂತ್ರ ಬಳಕೆಯಾಗದ ಸ್ಥಿತಿ

ಸಕಲೇಶಪುರ ಕ್ರಾಫಾರ್ಡ್ ಸರ್ಕಾರಿ ಆಸ್ಪತ್ರೆಯಲ್ಲಿ ಸ್ಕ್ಯಾನಿಂಗ್ ಯಂತ್ರವಿದ್ದರೂ, ನುರಿತ ತಜ್ಞರ ಕೊರತೆಯಿಂದ ಅದು ಬಳಕೆಯಾಗದೇ ತುಕ್ಕು ಹಿಡಿಯುತ್ತಿದೆ. ಖಾಸಗಿ ಕೇಂದ್ರಗಳ ಅವಲಂಬನೆ ತಪ್ಪಿಸಲು ಸರ್ಕಾರಿ ಆಸ್ಪತ್ರೆಯ ಸ್ಕ್ಯಾನಿಂಗ್ ಘಟಕವನ್ನು ಶೀಘ್ರ ದುರಸ್ತಿ ಮಾಡಿ, ತಜ್ಞರನ್ನು ನೇಮಿಸಿ ಸಾರ್ವಜನಿಕರಿಗೆ ಸೌಲಭ್ಯ ಕಲ್ಪಿಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248